ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ:ಎಸ್5/ಗ.ಯಂ.ಶಿ.ಪ.ಫ.ಪ್ರ./ಆಗಸ್ಟ್-2019/39/2019-20 ದಿನಾಂಕ: 24.09.2019

## ಸುತ್ತೋಲೆ

ವಿಷಯ: ಆಗಸ್ಟ್-2019 ರ ಮಾಹೆಯಲ್ಲಿ ನಡೆದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶ ಪ್ರಕಟಿಸುವ ಬಗ್ಗೆ.

*******

ಆಗಸ್ಟ್-2019ರ ಮಾಹೆಯಲ್ಲಿ ನಡೆದ ಫಲಿತಾಂಶವನ್ನು ಎಲ್ಲಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳಲ್ಲಿ ಹಾಗೂ ಮಂಡಳಿಯ ವೆಬ್ ಸೈಟ್‌ನಲ್ಲಿ (www.kseeb.kar.nic.in) ನಲ್ಲಿ ದಿನಾಂಕ:26.09.2019 ರಂದು ಬೆಳಿಗ್ಗೆ 11.00 ಗಂಟೆಗೆ ಪ್ರಕಟಿಸಲಾಗುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ಸದರಿ ಫಲಿತಾಂಶವು ಪರೀಕ್ಷೆಯಲ್ಲಿ ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

ಆಗಸ್ಟ್-2019ರ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| ಆಗಸ್ಟ್-2019ರ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 27.09.2019 |
| ಆಗಸ್ಟ್-2019ರ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 14.10.2019 |
| ಆಗಸ್ಟ್-2019ರ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 25.10.2019 |

ಮರು ಎಣಿಕೆ ಬಯಸುವ ವಿದ್ಯಾರ್ಥಿಗಳು (ಥಿಯರಿ ಉತ್ತರ ಪತ್ರಿಕೆ ಮಾತ್ರ) ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರು ಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಸದರಿ ಛಾಯಾಪ್ರತಿಯೊಂದಿಗೆ ಮಂಡಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು.

ಉತ್ತೀರ್ಣ ಅಥವಾ ಅನುತ್ತೀರ್ಣ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಛಾಯಾಪ್ರತಿ ಬಯಸಿದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ನಿಗಧಿಪಡಿಸಿದ ಶುಲ್ಕವನ್ನು ಮಂಡಳಿಯ ವೆಬ್‌ಸೈಟ್ ನಲ್ಲಿ ದೊರೆಯುವ NEFT CHALLAN Down load ಮಾಡಿಕೊಳ್ಳುವುದರ ಮೂಲಕ ಪಾವತಿಸಿ ಮೇಲ್ಕಂಡ ಅಂತಿಮ ದಿನಾಂಕದೊಳಗೆ, ಮಂಡಳಿಗೆ ಸಲ್ಲಿಸುವುದು. ನಿಗಧಿತ ಅವಧಿ ಮೀರಿ ಬಂದ ಅರ್ಜಿಗಳನ್ನು ಮಂಡಳಿ ಪರಿಗಣಿಸುವುದಿಲ್ಲ. ಜೊತೆಗೆ ಮಂಡಳಿಗೆ ಪಾವತಿಸಲಾದ ಮೊಬಲಗನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. **ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಪ್ರತ್ಯೇಕ ನಮೂನೆಗಳಿವೆ. ಇವುಗಳು ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು** ಆಯಾ ನಮೂನೆಗಳನ್ನು ಆಯಾ ಉದ್ದೇಶಕ್ಕೆ ಮಾತ್ರ ಬಳಸುವುದು.

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ.300/– (ಮೂರು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ.700/– (ಏಳು ನೂರು ರೂಪಾಯಿಗಳು) |

ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ 300/–ರಂತೆ ಜೆರಾಕ್ಸ್ ಪ್ರತಿ ಪಡೆಯಲು ಬಯಸುವ ಎಲ್ಲಾ ವಿಷಯಗಳಿಗೆ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ ರೂ.700/–ರಂತೆ ಮರುಮೌಲ್ಯಮಾಪನ ಬಯಸುವ ಎಲ್ಲಾ ವಿಷಯಗಳಿಗೂ ಶುಲ್ಕ ಪಾವತಿಸಬೇಕಾಗಿರುತ್ತದೆ. **ಮಂಡಳಿಯಿಂದ ಉತ್ತರ ಪತ್ರಿಕೆಯ ಛಾಯಾಪ್ರತಿ ಪಡೆಯದೇ ನೇರವಾಗಿ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.**

ಛಾಯಾಪ್ರತಿ ಮತ್ತು ಮರುಮೌಲ್ಯಮಾಪನದ ಅರ್ಜಿಗಳನ್ನು ಸಹಾಯಕ ನಿರ್ದೇಶಕರು, ಎಸ್ ಶಾಖೆ, 4ನೇ ಮಹಡಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ವಿಳಾಸಕ್ಕೆ ಸಲ್ಲಿಸಲು ತಿಳಿಸಿದೆ.

**ಫಲಿತಾಂಶ ಪ್ರಕಟಣೆಯಾದ ನಂತರ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಆಯಾ ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಸಂಸ್ಥೆಯ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ.**

- ಗಣಕಯಂತ್ರ ಶಿಕ್ಷಣ ಸಂಸ್ಥೆಗಳಿಂದ ಪರೀಕ್ಷಾ ಮಂಡಳಿಗೆ ಪತ್ರ ವ್ಯವಹರಿಸುವ ಪ್ರತಿಯೊಂದು ಪತ್ರದ ಮುಖ ಪುಟದಲ್ಲಿ **ತಮ್ಮ ಸಂಸ್ಥೆಗೆ ನೀಡಿರುವ ಶಾಲೆಯ ಸಂಕೇತ ಸಂಖ್ಯೆ, ದೂರವಾಣಿ ಸಂಖ್ಯೆ ಮತ್ತು E-Mail ID ಯನ್ನು ತಪ್ಪದೇ ನಮೂದಿಸುವುದು**
- ಆಗಸ್ಟ್–2019ರಲ್ಲಿ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.
- ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.
- SATS ಸಂಖ್ಯೆ ಹೊಂದಿಲ್ಲದ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಕಡ್ಡಾಯವಾಗಿ

ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) **ರೂ.175/-** ದಂಡಶುಲ್ಕವನ್ನು ಮಂಡಳಿಗೆ ಪಾವತಿಸಲಾಗಿರುವ Neft Challan ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.

- ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.
- ನಿಮ್ಮ ಸಂಸ್ಥೆಗೆ ಸಂಬಂಧಿಸದೇ ಇರುವ ಫಲಿತಾಂಶ ಪಟ್ಟಿಗಳು ಬಂದಲ್ಲಿ, **080-23360073** ದೂರವಾಣಿ ಮೂಲಕ ಮಂಡಳಿಗೆ ತಿಳಿಸಿ, ಕೂಡಲೇ ಮಂಡಳಿಗೆ ತಪ್ಪದೇ ಹಿಂದಿರುಗಿಸಲು ಸೂಚಿಸಿದೆ.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಗಣಕಯಂತ್ರ ಶಿಕ್ಷಣ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

(ವಿ.ಸುಮಂಗಲ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

ಪ್ರತಿಯನ್ನು:

1. ರಾಜ್ಯದ ಎಲ್ಲಾ ವಾಣಿಜ್ಯ ಶಾಲೆಗಳ ಪ್ರಾಚಾರ್ಯರುಗಳಿಗೆ ಮುಂದಿನ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ವಿಭಾಗೀಯ ಮಟ್ಟದ ಪ್ರಾದೇಶಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಗಳಿಗೆ ಕ್ರಮಕ್ಕಾಗಿ,
3. ನಿರ್ದೇಶಕರು(ಇತರೆ ಪರೀಕ್ಷೆಗಳು)/ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
4. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ
5. ಕಛೇರಿ ಪ್ರತಿ